**ಮಿಸಲೇನಿಯಸ್ ನಂ. 1/2017**
**ಆರ್ ಡಬ್ಲ್ಯು -2**

ದಿನಾಂಕ **11-12-2023** ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣ ವಚನವನ್ನು ಭೋಧಿಸಲಾಯಿತು.

ಪಾಟೀಸವಾಲುಃ ಶ್ರೀ. ಪಿ ಜಿ ಕೆ ಅರ್ಜಿದಾರ ಪರ ವಕೀಲರವರಿಂದ.

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಸಂಗತಿಗಳು ನನಗೆ ಗೊತ್ತಿರುತ್ತವೆ. ನಾನು 10 ನೇ ತರಗತಿಯವರೆಗೆ ಓದಿರುತ್ತೇನೆ. ಓ ಎಸ್ ನಂ.348/2004 ರಂತೆ ಅರ್ಜಿದಾರರು ದಾವೆ ಸಲ್ಲಿಸಿದ್ದರು ಎಂದರೆ ಸರಿ. ಸದರಿ ದಾವೆ ಡಿಕ್ರಿ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಹಾಗೂ ನನ್ನ ಸಹೋದರರು ಪಕ್ಷಗಾರರು ಎಂದರೆ ಸರಿ. ಶಂಕರಗೌಡ ಪಾಟೀಲ್ ರವರು ಆರ್ ಎ ನಂ. 20/2008 ಎಂದು ಮೇಲ್ಮನವಿ ಸಲ್ಲಿಸಿದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಹಿರಿಯ ದಿವಾಣಿ ನ್ಯಾಯಾಲಯದಲ್ಲಿ ನಾನು ಹಾಗೂ ನನ್ನ ಸಹೋದರರು ಮೇಲ್ಮನವಿಯನ್ನು ಸಲ್ಲಿಸಿರುತ್ತೇವೆ ಎಂದರೆ ಸರಿ. ಸದರಿ ಎರಡೂ ಮೇಲ್ಮನವಿಗಳು ಹಿರಿಯ ದಿವಾಣಿ ನ್ಯಾಯಾಲಯದಿಂದ ಮಾನ್ಯ ಜಿಲ್ಲಾ ನ್ಯಾಯಾಲಯಕ್ಕೆ ವರ್ಗಾವಣೆ ಆದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಜಿಲ್ಲಾ ನ್ಯಾಯಾಲಯದಲ್ಲಿ ಅರ್ಜಿಗಳಿಗೆ ಹೊಸ ನಂಬರ್ ದಾಖಲಿಸಿದ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಎರಡೂ ಆರ್ ಎ ಅರ್ಜಿಗಳನ್ನು ಒಂದುಗೂಡಿಸಿ ನಿಖಾಲಿ ಆಗಿದ್ದು ಇರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ.

ಮಹಾದೇವಿ ಮಡ್ಡಿ ಯಾರು ಎಂಬುದು ನನಗೆ ಗೊತ್ತಿರುವುದಿಲ್ಲ. ಅರ್ಜಿದಾರಳು ಹುಲಕೊಪ್ಪ ಗ್ರಾಮದ ನಿವಾಸಿ ಇದ್ದರೂ ಸಹ ಅವಳ ಬಗ್ಗೆ ಗೊತ್ತಿರುವುದಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹಳೇ ತೇಗೂರಿನಲ್ಲಿ ಇರುತ್ತೇನೆ. ಎದುರುಗಾರ ನಂ.1 ರವರು ತೀರಿಕೊಂಡ ದಿನಾಂಕ ನನಗೆ ಗೊತ್ತಿರುವುದಿಲ್ಲ. ಸದರಿಯವರು ಜಿಲ್ಲಾ ನ್ಯಾಯಾಲಯದಲ್ಲಿ ಅರ್ಜಿ ಬಾಕಿ ಇರುವಾಗಲೇ ತೀರಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ದಿಃ15-11-

2009 ರಂದು ತೀರಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ತೀರಿಕೊಂಡ ಬಗ್ಗೆ ನಾನಾಗಲೀ ನಮ್ಮ ವಕೀಲರಾಗಲೀ ಜಿಲ್ಲಾ ನ್ಯಾಯಾಲಯದ ಗಮನಕ್ಕೆ ತಂದಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಈ ರೀತಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಜಿಲ್ಲಾ ನ್ಯಾಯಾಲಯದಲ್ಲಿ ಆದೇಶವಾಗಿದ್ದು, ಪುನಃ ಪರಿಶೀಲನೆ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿದರು ಎಂದರೆ ಸರಿ.

ಮಾನ್ಯ ನ್ಯಾಯಾಲಯಕ್ಕೆ ಬಂದ ನಂತರ ಎದುರುಗಾರ ನಂ. 1 ರವರು ತೀರಿಕೊಂಡಿರುತ್ತಾರೆ ಎಂಬ ಮಾಹಿತಿಯನ್ನು ನನ್ನ ಪರ ವಕೀಲರು ಎದುರಗಾರರಿಗೆ ಹಾಗೂ ಮಾನ್ಯ ನ್ಯಾಯಾಲಯಕ್ಕೆ ತಿಳಿಸಿರುತ್ತಾರೆ ಎಂದರೆ ಸರಿ. ಅರ್ಜಿದಾರರು ಚಿಕ್ಕಂದಿನಿಂದಾಗಿಂದಲೂ ಹುಲಕೊಪ್ಪ ಗ್ರಾಮದಲ್ಲಿಯೇ ವಾಸಿಸುತ್ತಾರೆ ಎಂದರೆ ಸರಿ. ಓ ಎಸ್ ನಂ.348/2004 ದಾವೆಯನ್ನು ಯಾವ ಕಾರಣಕ್ಕಾಗಿ ಸಲ್ಲಿಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಓ ಎಸ್ ನಂ.348/2004 ಮಹಾದೇವಿ ಮಡ್ಡಿ ಪರವಾಗಿ ಆದೇಶ ಆಗಿರುತ್ತದೆ ಎಂದರೆ ಸರಿ. ಓ ಎಸ್ ನಂ.348/2004 ರಲ್ಲಿ ಎದುರುಗಾರ ನಂ. 1 ರವರ ವಾರ್ಸಾ ತರಬೇಕು ಎಂದು ದಾವೆ ಚಾಲ್ತಿ ಇತ್ತು ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಎದುರುಗಾರ ನಂ. 1 ರವರ ವಾರ್ಸಾ ಯಾರು ಎಂದು ಗೊತ್ತಿರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಈ ವಿಷಯದ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹ ನಾನು ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಎದುರುಗಾರ ನಂ. 1 ರವರ ವಾರ್ಸಾ ಯಾರು ಎಂದು ಊರಿನಲ್ಲಿ ಬಂದು ವಿಚಾರಿಸಿದ್ದು, ನೀವು ಯಾರು ಸರಿಯಾಗಿ ಉತ್ತರ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರ ನಂ. 1 ರವರಿಗೆ ಯಾವುದೇ ಮಾಹಿತಿ ನೀಡಬೇಡಿ ಎಂದು ಊರಿನವರ ಮೇಲೆ ಒತ್ತಡ ಹಾಕಿರುತ್ತೇವೆ ಎಂದರೆ ಸರಿಯಲ್ಲ. ನಿಗದಿತ ಸಮಯದಲ್ಲಿ ಎದುರುಗಾರ ನಂ. 1 ರವರ ವಾರಸುದಾರರನ್ನು ಪಕ್ಷಗಾರರನ್ನಾಗಿ ಮಾಡದೇ ಇರುವ ಕಾರಣ ದಾವೆ ವಜಾ ಗೊಂಡಿರುತ್ತದೆ ಎಂದರೆ ಸರಿ.

ಓ ಎಸ್ ನಂ.348/2004 ಇದನ್ನು ಪುನರ್ ಸ್ಥಾಪಸಿದರೆ ನನಗೆ ಯಾವುದೇ ತೊಂದರೆ ಆಗುವುದಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ತೊಂದರೆ ಕೊಡುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ. ಕಾಲವಿಳಂಬವನ್ನು ಮನ್ನಾ ಮಾಡಿದರೆ ನನಗೆ ಯಾವುದೇ ರೀತಿ ತೊಂದರೆ ಆಗುವುದಿಲ್ಲ ಎಂದರೆ ಸರಿಯಲ್ಲ. ನಾನು ಆ ರೀತಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ.ಸರಿ ಇದೆ. ನನ್ನ ಸಮಕ್ಷಮ

ಪ್ರಧಾನ ದಿವಾಣಿ ನ್ಯಾಯಾಧೀಶರು
ಮತ್ತು ಪ್ರಧಾನ ಜೆ.ಎಂ.ಎಫ್.ಸಿ. ಧಾರವಾಡ.

ಮಿಸಲೇನಿಯಸ್ ನಂ**. 1/2017**
ಆರ್ ಡಬ್ಲ್ಯು **-2**